# Akashvani : Bangalore
# Regional Bulletin In Kannada
# 14.07.2025 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**14.07.2025 / 18.40 hrs**

**<><*<><>*><>**

<u>ಮುಖ್ಯಾಂಶಗಳು</u>

- ರಾಜ್ಯದ ವಿಕಾಸಕ್ಕೆ ಮುಂದಿನ ೫ ವರ್ಷಗಳಲ್ಲಿ ೫ ಲಕ್ಷ ಕೋಟಿ ರೂಪಾಯಿ ವೆಚ್ಚದಲ್ಲಿ ಅಭಿವೃದ್ಧಿ ಕಾಮಗಾರಿ - ಕೇಂದ್ರ ಸಚಿವ ನಿತಿನ್ ಗಡ್ಕರಿ

- ವಿಜಯಪುರ ಜಿಲ್ಲೆಯ ಇಂಡಿಯಲ್ಲಿ ೪ ಸಾವಿರದ ೫೫೯ ಕೋಟಿ ರೂಪಾಯಿಗಳ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮುಖ್ಯಮಂತ್ರಿ ಶಂಕುಸ್ಥಾಪನೆ

- ರಾಮನಗರದ ರೇಷ್ಮೆ ಮಾರುಕಟ್ಟೆಯಲ್ಲಿ ಪ್ರತಿನಿತ್ಯ ಎರಡು ಕೋಟಿ ರೂಪಾಯಿಗಳ ವಹಿವಾಟು

- ಶಕ್ತಿ ಯೋಜನೆಯಡಿ ೫೦೦ ಕೋಟಿ ಮೀರಿದ ಮಹಿಳಾ ಪ್ರಯಾಣಿಕರ ಸಂಖ್ಯೆ; ರಾಜ್ಯದ ವಿವಿಧೆಡೆ ಸಿಹಿ ಹಂಚಿ ಸಂಭ್ರಮ

**<><*<><>*><>**

ಶಿವಮೊಗ್ಗದ ಬಹುನಿರೀಕ್ಷಿತ ಅಂಬಾರಗೋಡ್ಲು-ಕಳಸವಳ್ಳಿಯ ಸಿಗಂದೂರು ಸೇತುವೆಯನ್ನು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಇಂದು ಲೋಕಾರ್ಪಣೆಗೊಳಿಸಿದರು. ಸುಮಾರು ೪೭೩ ಕೋಟಿ ರೂಪಾಯಿಗಳ ವೆಚ್ಚದಲ್ಲಿ ೨.೪೪ ಕಿ.ಮೀ. ಉದ್ದದ ಸೇತುವೆಯು ದೇಶದ ಎರಡನೇ ಅತೀ ಉದ್ದದ ಕೇಬಲ್ ಆಧಾರಿತ ಸೇತುವೆಯಾಗಿದೆ. ನಂತರ ನಡೆದ ವೇದಿಕೆ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಸಚಿವ ನಿತಿನ್ ಗಡ್ಕರಿ, ಈ ಸೇತುವೆ ಮತ್ತು ರಸ್ತೆಯನ್ನು ಸಿಗಂದೂರು ಚೌಡೇಶ್ವರಿ ಮಾತೆಗೆ ಸಮರ್ಪಿಸಲಾಗುವುದು ಎಂದು ಹೇಳಿದರು.

ಧ್ವನಿ : ನಿತಿನ್ ಗಡ್ಕರಿ ( ೩೨ ಸೆಕೆಂಡುಗಳು)

ಕರ್ನಾಟಕದ ವಿಕಾಸಕ್ಕೆ ಮುಂದಿನ ೫ ವರ್ಷಗಳಲ್ಲಿ ೫ ಲಕ್ಷ ಕೋಟಿ ರೂಪಾಯಿ ವೆಚ್ಚದ ಕಾಮಗಾರಿಗಳನ್ನು ನಡೆಸಲಾಗುವುದು. ೧೦ ಸಾವಿರ ಕೋಟಿ ರೂಪಾಯಿ ವೆಚ್ಚದ ಬೆಳಗಾವಿ-ಹುನಗುಂದ-ರಾಯಚೂರು ಚತುಷ್ಪಥ ಕಾಮಗಾರಿಯನ್ನು ತ್ವರಿತಗೊಳಿಸಲಾಗುವುದು ಎಂದು ತಿಳಿಸಿದರು.

**ಧ್ವನಿ: ನಿತಿನ್ ಗಡ್ಕರಿ ಕೇಂದ್ರ ಸಚಿವ ( ೩೨ ಸೆಕೆಂಡ್ಸ್)**

ಈ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಸಂಸದ ಬಿ.ವೈ.ರಾಘವೇಂದ್ರ, ಹಿರಿಯ ನಾಯಕ ಕಾಗೋಡು ತಿಮ್ಮಪ್ಪ, ಶಿವಮೊಗ್ಗ ನಗರ ಶಾಸಕ ಎಸ್.ಎನ್.ಚನ್ನಬಸಪ್ಪ, ಪರಿಷತ್ ಸದಸ್ಯರಾದ ಡಿ.ಎಸ್.ಅರುಣ್ ಹಾಗೂ ಡಾ. ಧನಂಜಯ ಸರ್ಜಿ ಉಪಸ್ಥಿತರಿದ್ದರು.

**<><*<><>*><>**

ವಿಜಯಪುರ ಜಿಲ್ಲೆಯ ಇಂಡಿ ಪೊಲೀಸ್ ಪರೇಡ್ ಮೈದಾನದಲ್ಲಿ ೪ ಸಾವಿರದ ೫೫೯ ಕೋಟಿ ರೂಪಾಯಿಗಳ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಶಂಕುಸ್ಥಾಪನೆ ಹಾಗೂ ಲೋಕಾರ್ಪಣೆಗೊಳಿಸಿದರು. ಜಲ ಸಂಪನ್ಮೂಲ ಇಲಾಖೆಯ ವತಿಯಿಂದ ೨೩೨.೪೪ ಕೋಟಿ ರೂಪಾಯಿ ವೆಚ್ಚದಲ್ಲಿ ಇಂಡಿ ಮತ್ತು ಚಡಚಣ ತಾಲೂಕಿನ ೧೯ ಕೆರೆಗಳಿಗೆ ನೀರು ತುಂಬಿಸುವ ಯೋಜನೆ, ೩೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾದ ೨೪೪ ವಾಣಿಜ್ಯ ಮಳಿಗೆಗಳ ಶ್ರೀ ಸಿದ್ದೇಶ್ವರ ಬೃಹತ್ ವಾಣಿಜ್ಯ ಸಂಕೀರ್ಣ, ೧೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾದ ಮೊರಾರ್ಜಿ ದೇಸಾಯಿ ವಸತಿ ಶಾಲೆ ಸೇರಿದಂತೆ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಹಾಗೂ ಲೋಕಾರ್ಪಣೆ ನೆರವೇರಿತು. ಇದೇ ವೇಳೆ ನಿಂಬೆ ಅಭಿವೃದ್ಧಿ ಮಂಡಳಿಯ ಲಾಂಛನವನ್ನು ಬಿಡುಗಡೆಗೊಳಿಸಿದರು. ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಬಿಜೆಪಿ ಅಪಪ್ರಚಾರಕ್ಕೆ ಅಭಿವೃದ್ಧಿ ಮೂಲಕವೇ ಉತ್ತರ ನೀಡಲಾಗುವುದು ಎಂದು ಹೇಳಿದರು. ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಎಂ.ಬಿ.ಪಾಟೀಲ್, ಶಿವಾನಂದ ಎಸ್.ಪಾಟೀಲ್ ಉಪಸ್ಥಿತರಿದ್ದರು.

**<><*<><>*><>**

ರೇಷ್ಮೆ ಕೃಷಿಯು ಹೆಚ್ಚು ಲಾಭ ತರುವ ಕೃಷಿಯಾಗಿದ್ದು, ಇತ್ತೀಚಿನ ದಿನಗಳಲ್ಲಿ ರೇಷ್ಮೆ ಕೃಷಿಯಲ್ಲಿ ತೊಡಗಿಸಿಕೊಳ್ಳುವವರ ಸಂಖ್ಯೆ ಹೆಚ್ಚಾಗುತ್ತಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದ್ದಾರೆ. ತುಮಕೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ ಹಾಗೂ ರೇಷ್ಮೆ ಇಲಾಖೆ ಸಹಯೋಗದಲ್ಲಿ ಇಂದು ನಗರದ ಗುಬ್ಬಿ ವೀರಣ್ಣ ಕಲಾಕ್ಷೇತ್ರದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ರೇಷ್ಮೆ ಬೆಳೆಗಾರರ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡಿದರು. ರಾಜ್ಯದಲ್ಲಿ ೩೫ ಲಕ್ಷಕ್ಕೂ ಹೆಚ್ಚಿನ ಕೃಷಿಕರು ರೇಷ್ಮೆ ಉದ್ಯಮವನ್ನು ಅವಲಂಬಿಸಿದ್ದಾರೆ. ಪ್ರಾರಂಭದಲ್ಲಿ ರಾಜ್ಯದ ಏಳೆಂಟು ಜಿಲ್ಲೆಗಳಲ್ಲಿದ್ದ ರೇಷ್ಮೆ ಉದ್ಯಮ, ಪ್ರಸ್ತುತ ರಾಜ್ಯದಾದ್ಯಂತ ಹಬ್ಬುತ್ತಿದೆ. ರಾಮನಗರ ಜಿಲ್ಲೆಯು ಏಷ್ಯಾದಲ್ಲಿಯೇ ಬೃಹತ್ ರೇಷ್ಮೆ ಮಾರುಕಟ್ಟೆಯಾಗಿ ಗುರುತಿಸಿಕೊಂಡಿದ್ದು, ಪ್ರತೀ ದಿನ ೨ ಕೋಟಿ ರೂಪಾಯಿ ವಹಿವಾಟು ನಡೆಯುತ್ತಿದೆ ಎಂದು ಡಾ. ಜಿ. ಪರಮೇಶ್ವರ್ ಹೇಳಿದರು.

**<><*<><>*><>**

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಐದು ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಮಹಿಳೆಯರಿಗೆ ಉಚಿತ ಪ್ರಯಾಣದ ಸೌಲಭ್ಯ ಕಲ್ಪಿಸುವ ಶಕ್ತಿ ಯೋಜನೆಯಡಿ ಈವರೆಗೆ ೫೦೦ ಕೋಟಿ ಟಿಕೆಟ್‌ಗಳನ್ನು ವಿತರಿಸಲಾಗಿದ್ದು, ಈ ಯೋಜನೆಗೆ ರಾಜ್ಯ ಸರ್ಕಾರ ೧೨ ಸಾವಿರದ ೬೬೯ ಕೋಟಿ ರೂಪಾಯಿ ವೆಚ್ಚ

ಮಾಡಿದೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಯಲುವಳ್ಳಿ ಎನ್.ರಮೇಶ್ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರದಲ್ಲಿ ನಡೆದ ಶಕ್ತಿ ಯೋಜನೆ ಸಂಭ್ರಮಾಚರಣೆ ಕಾರ್ಯಕ್ರಮದಲ್ಲಿ ಚಾಲಕ, ನಿರ್ವಾಹಕರನ್ನು ಸನ್ಮಾನಿಸಿ, ಪ್ರಯಾಣಿಕರಿಗೆ ಸಿಹಿ ಹಂಚಿ ಮಾತನಾಡಿದ ಅವರು, ಮಹಿಳೆಯರು ಶಕ್ತಿ ಯೋಜನೆಯಡಿ ವಿವಿಧ ದೇವಾಲಯ, ಹಲವು ಪ್ರವಾಸಿ ತಾಣ, ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುತ್ತಿರುವುದರಿಂದ ಅದು ಆರ್ಥಿಕ ಚಟುವಟಿಕೆಗಳ ಮೇಲೂ ಸಕಾರಾತ್ಮಕ ಪರಿಣಾಮ ಬೀರುತ್ತಿದೆ ಎಂದು ಹೇಳಿದರು.

**<><*<><>*><>**

ಶಕ್ತಿ ಯೋಜನೆಯಡಿ ೫೦೦ ಕೋಟಿ ಮಹಿಳಾ ಪ್ರಯಾಣಿಕರ ಪ್ರಯಾಣ ಸಂಭ್ರಮದ ಅಂಗವಾಗಿ ಕೋಲಾರ ನಗರದ ಹೊಸ ಬಸ್ ನಿಲ್ದಾಣದಲ್ಲಿ ಶಾಸಕ ಕೊತ್ತೂರು ಮಂಜುನಾಥ್ ನೇತೃತ್ವದಲ್ಲಿ ಪ್ರಯಾಣಿಕರಿಗೆ ಸಿಹಿ ಹಂಚಲಾಯಿತು.

**<><*<><>*><>**

ರಾಜ್ಯಾದ್ಯಂತ ಪಂಚ ಗ್ಯಾರಂಟಿಗಳು ಎರಡೂ ವರ್ಷಗಳನ್ನು ಪೂರೈಸಿದೆ. ಅನೇಕ ಮಹಿಳೆಯರಿಗೆ ಶಕ್ತಿ ಯೋಜನೆ ಸಹಕಾರಿಯಾಗಿದೆ ಎಂದು ಮಂಡ್ಯ ಶಾಸಕ ಪಿ. ರವಿಕುಮಾರ್ ಹೇಳಿದ್ದಾರೆ. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಮಂಡ್ಯ ನಗರದ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಲ್ಲಿ ಆಯೋಜಿಸಲಾಗಿದ್ದ ರಾಜ್ಯ ಸರ್ಕಾರದ ಎರಡು ವರ್ಷಗಳ ಅಭಿವೃದ್ಧಿ ಕಾರ್ಯಕ್ರಮಗಳ ಸಾಧನೆ ಹಾಗೂ ಪಂಚ ಗ್ಯಾರಂಟಿ ಯೋಜನೆಗಳನ್ನು ಬಿಂಬಿಸುವ ವಸ್ತು ಪ್ರದರ್ಶನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

**<><*<><>*><>**

ದಾವಣಗೆರೆ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿಂದು ಶಕ್ತಿ ಯೋಜನೆಯ ೫೦೦ ಕೋಟಿ ಮಹಿಳಾ ಪ್ರಯಾಣಿಕರ ಉಚಿತ ಪ್ರಯಾಣದ ಹಿನ್ನೆಲೆಯಲ್ಲಿ ಹಮ್ಮಿಕೊಂಡಿದ್ದ ಸಂಭ್ರಮೋತ್ಸವದಲ್ಲಿ ಮಹಿಳಾ ನಿರ್ವಾಹಕಿಯರನ್ನು ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ ಸನ್ಮಾನಿಸಿದರು. ಬೆಳಗಾವಿಯಲ್ಲಿ ಇಂದು ನಡೆದ ಶಕ್ತಿ ಯೋಜನೆಯ ಸಂಭ್ರಮಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಶಾಸಕ ರಾಜು ಸೇಠ್, ಸರ್ಕಾರದ ಯೋಜನೆಯಿಂದ ಮಹಿಳೆಯರ ಸ್ವಾವಲಂಬಿ ಬದುಕಿಗೆ ಪ್ರೇರಣೆಯಾಗಿದೆ ಎಂದು ಹೇಳಿದರು.

**<><*<><>*><>**

ಹಿರಿಯ ನಟಿ ಬಿ.ಸರೋಜಾದೇವಿ ಇಂದು ಬೆಂಗಳೂರಿನಲ್ಲಿ ನಿಧನರಾಗಿದ್ದಾರೆ. ಅವರಿಗೆ ೮೭ ವರ್ಷ ವಯಸ್ಸಾಗಿತ್ತು. ೬ ದಶಕಗಳ ಕಾಲ ಚಿತ್ರರಂಗದಲ್ಲಿ ಸೇವೆ ಸಲ್ಲಿಸಿದ್ದ ಇವರು, ಅಭಿನಯ ಸರಸ್ವತಿ ಎಂದು ಖ್ಯಾತರಾಗಿದ್ದರು. ಕನ್ನಡ ಮಾತ್ರವಲ್ಲದೇ ತಮಿಳು, ತೆಲುಗು, ಹಿಂದಿ ಸಿನಿಮಾ ರಂಗಕ್ಕೂ ಅವರು ಅಮೂಲ್ಯ ಕೊಡುಗೆ ನೀಡಿದ್ದು, ೨೦೦ಕ್ಕೂ ಅಧಿಕ ಚಲನಚಿತ್ರಗಳಲ್ಲಿ ನಟಿಸಿ, ಜನಮನ ಗೆದ್ದಿದ್ದರು. ಮೇರು ನಟರಾದಂತಹ ಡಾ. ರಾಜಕುಮಾರ್, ಕಲ್ಯಾಣಕುಮಾರ್ ಸೇರಿದಂತೆ ಅನೇಕರೊಂದಿಗೆ ನಟಿಸಿದ್ದ ಅವರು, ಅಮರಶಿಲ್ಪಿ ಜಕಣಾಚಾರಿ, ಭಾಗ್ಯವಂತರು, ಬಭ್ರುವಾಹನ ಮತ್ತು ಕಥಾಸಂಗಮ ಚಲನಚಿತ್ರಗಳಲ್ಲಿ ಅಭಿನಯಿಸಿ ಮೆಚ್ಚುಗೆಗೆ ಪಾತ್ರರಾಗಿದ್ದರು. ಭಾರತೀಯ ಚಿತ್ರರಂಗಕ್ಕೆ ಅವರು ನೀಡಿದಂತ ಅಮೂಲ್ಯ ಕೊಡುಗೆಗಳಿಗಾಗಿ ಅವರಿಗೆ ಭಾರತ ಸರ್ಕಾರ ಪದ್ಮಭೂಷಣ ಹಾಗೂ ಪದ್ಮಶ್ರೀ ಪ್ರಶಸ್ತಿಗಳನ್ನು ನೀಡಿ ಗೌರವಿಸಿದೆ. ೬೦ನೇ ಸ್ವಾತಂತ್ರ್ಯೋತ್ಸವದ ಸಂದರ್ಭದಲ್ಲಿ ಅವರಿಗೆ ಜೀವಮಾನ ಸಾಧನೆ ಪ್ರಶಸ್ತಿ ನೀಡಿ ಸನ್ಮಾನಿಸಲಾಗಿದೆ. ಕರ್ನಾಟಕ ಸರ್ಕಾರ ಡಾ. ರಾಜಕುಮಾರ್ ಜೀವಮಾನ ಸಾಧನೆ ಪ್ರಶಸ್ತಿ, ತಮಿಳುನಾಡು ಸರ್ಕಾರ ಕಲೈಮಾಮಣಿ ಜೀವಮಾನ ಸಾಧನೆ ಪ್ರಶಸ್ತಿ

ಹಾಗೂ ಆಂಧ್ರಪ್ರದೇಶ ಸರ್ಕಾರ ಎನ್‌ಟಿಆರ್ ರಾಷ್ಟ್ರೀಯ ಪ್ರಶಸ್ತಿ ನೀಡಿ ಗೌರವಿಸಿದೆ. ನಟಿ ಬಿ.ಸರೋಜಾದೇವಿ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಂಸದ ಬಸವರಾಜ ಬೊಮ್ಮಾಯಿ, ನಟ ಶಿವರಾಜ್ ಕುಮಾರ್ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ. ನಾಳೆ ಅವರ ಅಂತ್ಯಕ್ರಿಯೆ ನಡೆಯಲಿದೆ.

**<><*<><>*><>**

ರಾಜ್ಯದಲ್ಲಿ ನೈರುತ್ಯ ಮುಂಗಾರು ಸಾಮಾನ್ಯವಾಗಿತ್ತು. ಕರಾವಳಿಯ ಬಹುತೇಕ ಕಡೆಗಳಲ್ಲಿ, ದಕ್ಷಿಣ ಒಳನಾಡಿನ ಅನೇಕ ಸ್ಥಳಗಳಲ್ಲಿ ಹಾಗೂ ಉತ್ತರ ಒಳನಾಡಿನ ಕೆಲವು ಸ್ಥಳಗಳಲ್ಲಿ ಇಂದು ಮಳೆಯಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ಉಡುಪಿ ಜಿಲ್ಲೆಯ ಕೋಟಾದಲ್ಲಿ ಅತೀ ಹೆಚ್ಚು ೯ ಸೆಂಟಿ ಮೀಟರ್ ಮಳೆಯಾಗಿದೆ. ಇದೇ ವೇಳೆ ಮಂಗಳೂರು ಮತ್ತು ಶಕ್ತಿ ನಗರ ತಲಾ ೮, ಉಡುಪಿ, ಬಂಟ್ವಾಳ, ಸುಳ್ಯ ಮತ್ತು ಆಗುಂಬೆ ತಲಾ ೭ ಸೆಂಟಿ ಮೀಟರ್ ಮಳೆಯಾಗಿದೆ. ಪುತ್ತೂರು ಮತ್ತು ಮೂಡುಬಿದ್ರೆ ತಲಾ ೬, ಮಂಗಳೂರು ವಿಮಾನ ನಿಲ್ದಾಣ, ಮಾಣಿ , ಮುಲ್ಕಿ, ಕಾರವಾರ, ಮಂಕಿ, ಕ್ಯಾಸಲ್ ರಾಕ್ ಮತ್ತು ಕಾರ್ಕಳದಲ್ಲಿ ತಲಾ ೫ ಸೆಂಟಿ ಮೀಟರ್ ಮಳೆಯಾಗಿದೆ. ಮುಂದಿನ ಮೂರು ದಿನಗಳಲ್ಲಿ ರಾಜ್ಯದ ಕೆಲವು ಸ್ಥಳಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ. ರಾಜ್ಯದ ಕರಾವಳಿಯಲ್ಲಿ ೫೦ ಕೀಲೋ ಮೀಟರ್‌ನಿಂದ ೬೦ ಕಿಲೋ ಮೀಟರ್ ವೇಗದಲ್ಲಿ ಗಾಳಿ ಬೀಸಲಿದ್ದು, ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಸೂಚಿಸಲಾಗಿದೆ. ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು ಮತ್ತು ಸುತ್ತಮುತ್ತ ಸಾಮಾನ್ಯವಾಗಿ ಮೋಡಕವಿದ ವಾತಾವರಣ. ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**